ವ್ಯವಸ್ಥಾಪಕ ನಿರ್ದೇಶಕರ ಕಛೇರಿ
ರಾಜೀವ್ ಗಾಂಧಿ ಗ್ರಾಮೀಣ ವಸತಿ ನಿಗಮ ನಿಯಮಿತ

ಕರ್ನಾಟಕ ಸರ್ಕಾರ

ನಂ.1-4, ಐ.ಟಿ. ಪಾರ್ಕ್, 1ನೇ ಮಹಡಿ
4ನೇ ಮುಖ್ಯರಸ್ತೆ, ರಾಜಾಜಿನಗರ ಕೈಗಾರಿಕಾ ಪ್ರದೇಶ
ರಾಜಾಜಿನಗರ, ಬೆಂಗಳೂರು - 560 010
ದೂರವಾಣಿ : 080 2311 8888 ಫ್ಯಾಕ್ಸ್: 080 23143130
ಇ-ಮೇಲ್ : rgrhcl@rediffmail.com

SD RGRHCL 01 ANRT 11 2017-18/6761

Date: 19.12.2017

ಇವರಿಗೆ,

ರಾಜ್ಯದ ಎಲ್ಲಾ ಜಿಲ್ಲಾಧಿಕಾರಿಗಳು

ಹಾಗೂ ಎಲ್ಲಾ ಮುಖ್ಯ ಕಾರ್ಯನಿರ್ವಾಹಣಾಧಿಕಾರಿಗಳು,
ಜಿಲ್ಲಾ ಪಂಚಾಯತ್.

ಎಲ್ಲಾ ಕಾರ್ಯನಿರ್ವಾಹಣಾಧಿಕಾರಿಗಳು,
ತಾಲ್ಲೂಕು ಪಂಚಾಯತ್.

ಮಾನ್ಯರೆ,

ವಿಷಯ: ಡಾ.ಬಿ.ಆರ್. ಅಂಬೇಡ್ಕರ್ ನಿವಾಸ್ ಯೋಜನೆಯಡಿ 2017-18ನೇ ಸಾಲಿನಲ್ಲಿ ಆಯ್ಕೆಗೊಳಿಸಲಾದ ಫಲಾನುಭವಿಗಳ ದಾಖಲೆಗಳನ್ನು ಕಡ್ಡಾಯವಾಗಿ ಆನ್‌ಲೈನ್ ಮೂಲಕ ಸಲ್ಲಿಸುವ ಬಗ್ಗೆ.

ಉಲ್ಲೇಖ: ಸರ್ಕಾರದ ಆದೇಶ ಸಂಖ್ಯೆ: ವಇ 35 ಹೆಚ್‌ಎಹೆಚ್ 2017(1), ಬೆಂಗಳೂರು, ದಿನಾಂಕ:05.06.2017.

*******

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತರ ಆದೇಶದಂತೆ ಡಾ.ಬಿ.ಆರ್.ಅಂಬೇಡ್ಕರ್ ನಿವಾಸ್ ಯೋಜನೆಯಡಿ 2017-18ನೇ ಸಾಲಿನಲ್ಲಿ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದ ನಿವೇಶನ ಹೊಂದಿರುವ ಎಲ್ಲಾ ಅರ್ಹ ವಸತಿ ರಹಿತರಿಗೆ ಬೇಡಿಕೆ ಮೇಲೆ ಮನೆಗಳನ್ನು ನೀಡಲು ಸರ್ಕಾರದಿಂದ ಆದೇಶ ಹೊರಡಿಸಲಾಗಿದೆ.

ಆದೇಶದಂತೆ, ಡಾ॥.ಬಿ.ಆರ್. ಅಂಬೇಡ್ಕರ್ ನಿವಾಸ್ ಯೋಜನೆಯಡಿ 2017-18ನೇ ಸಾಲಿನಲ್ಲಿ ಬೇಡಿಕೆ ಮೇಲೆ ಮನೆ ಮಂಜೂರು ಮಾಡಲು ಈ ಕೆಳಕಂಡ ದಾಖಲೆಗಳನ್ನು ಕಡ್ಡಾಯಗೊಳಿಸಲಾಗಿದೆ.

1. ಜಾತಿ ಮತ್ತು ಆದಾಯ ಪ್ರಮಾಣ ಪತ್ರದ ಆರ್.ಡಿ ಸಂಖ್ಯೆ (Through Web Service)
2. ಪಡಿತರ ಚೀಟಿ ಸಂಖ್ಯೆ (Through Web Service)
3. ಆಧಾರ್ ಸಂಖ್ಯೆ.
4. ಫಲಾನುಭವಿಯು ಮನೆ ನಿರ್ಮಿಸಿಕೊಳ್ಳಬೇಕಾಗಿರುವ ನಿವೇಶನ ಖಾತಾ/ಸರ್ವೆ ನಂಬರ್.

ಅರ್ಹ ಫಲಾನುಭವಿಗಳನ್ನು ಮಾರ್ಗಸೂಚಿಗಳನ್ವಯ ಆಯ್ಕೆಗೊಳಿಸಿ Login ನಲ್ಲಿ ಸಲ್ಲಿಸಲು ತಿಳಿಸಲಾಗಿತ್ತು. ಆದರೆ ಕೆಲವು ಗ್ರಾಮ ಪಂಚಾಯ್ತಿಗಳು ವಿವಿಧ ವಸತಿ ಯೋಜನೆಗಳಡಿ ಹಿಂದಿನ ಶ್ರೇಣಿಗಳಲ್ಲಿ ವಸತಿ ಸೌಕರ್ಯ ಪಡೆದ ಫಲಾನುಭವಿಗಳನ್ನು ಮರು ಆಯ್ಕೆಗೊಳಿಸುತ್ತಿರುವುದು, ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡವಲ್ಲದ ಫಲಾನುಭವಿಗಳನ್ನು ಹಾಗೂ ಅನರ್ಹ ಫಲಾನುಭವಿಗಳನ್ನು ಆಯ್ಕೆಗೊಳಿಸುತ್ತಿರುವುದಾಗಿ ನಿಗಮಕ್ಕೆ ದೂರುಗಳು ಬರುತ್ತಿವೆ. ಇದಲ್ಲದೇ ಒಂದೇ ಕುಟುಂಬದ ಹಲವು ಸದಸ್ಯರ ಹೆಸರಿನಲ್ಲಿ ಮನೆ ಪಡೆಯುತ್ತಿರುವುದು ಹಾಗೂ ಒಂದು ಗ್ರಾಮದಲ್ಲಿನ ಕುಟುಂಬಗಳ ಸಂಖ್ಯೆಗಿಂತ ಅಧಿಕ ಸಂಖ್ಯೆಯಲ್ಲಿ ವಸತಿ ಪಡೆದಿರುವುದು ಕೂಡ ಕಂಡು ಬಂದಿರುತ್ತದೆ. ಉದಾಹರಣೆಗೆ ಕಲಬುರ್ಗಿ ತಾಲ್ಲೂಕಿನ ಚಿಂಚೋಳಿ ತಾಲ್ಲೂಕಿನ ಮಾಹಿತಿಯನ್ನು ಈ ಪತ್ರದೊಂದಿಗೆ ಲಗತ್ತಿಸಿದೆ.

ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದ ನಿವೇಶನ ಹೊಂದಿರುವ ಎಲ್ಲಾ ಅರ್ಹ ವಸತಿ ರಹಿತರಿಗೆ ವಸತಿ ಸೌಕರ್ಯ ಒದಗಿಸುವುದು ಸರ್ಕಾರದ ಮಹತ್ವಕಾಂಕ್ಷಿ ಕಾರ್ಯಕ್ರಮವಾಗಿರುತ್ತದೆ. ಹಾಗೆಯೇ ಈ ಯೋಜನೆಯು ದುರುಪಯೋಗವಾಗದಂತೆ ತಡೆಗಟ್ಟವುದು ಸಹಾ ನಮ್ಮೆಲ್ಲರ ಜವಾಬ್ದಾರಿಯಾಗಿರುತ್ತದೆ.

ಈ ಹಿನ್ನಲೆಯಲ್ಲಿ ಸರ್ಕಾರದ ಉಲ್ಲೇಖಿತ ಆದೇಶರಲ್ಲಿ ಹೊರಡಿಸಿರುವ ಮಾರ್ಗಸೂಚಿಗಳನ್ವಯ ಮೇಲ್ಕಂಡ ದಾಖಲೆಗಳನ್ನು ಸಲ್ಲಿಸುವುದನ್ನು ಕಡ್ಡಾಯಗೊಳಿಸಲಾಗಿದೆ.

ಮುಂದುವರೆದು, ಸದರಿ ಯೋಜನೆಯಡಿ ಈಗಾಗಲೇ ಅಂತಿಮ ಅನುಮೋದನೆಗೆ ನಿಗಮಕ್ಕೆ ಸಲ್ಲಿಸಲಾದ ಫಲಾನುಭವಿಗಳಿಗೆ ಹಾಗೂ ಅನುಮೋದಿಸಲು ವಿವಿಧ Login ನಲ್ಲಿ ಬಾಕಿ ಇರುವ ಫಲಾನುಭವಿಗಳಿಗೂ ಸಹ ಸದರಿ ದಾಖಲೆಗಳನ್ನು ಸಲ್ಲಿಸುವುದು ಕಡ್ಡಾಯವಾಗಿದ್ದು, ಇದಕ್ಕಾಗಿ ಗ್ರಾಮ ಪಂಚಾಯತ್ ಲಾಗಿನ್‌ನಲ್ಲಿ ಪ್ರತ್ಯೇಕವಾಗಿ "ಮೆನು" ನೀಡಲಾಗಿದೆ.

ಆದ್ದರಿಂದ ಡಾ.ಬಿ.ಆರ್. ಅಂಬೇಡ್ಕರ್ ನಿವಾಸ್ ಯೋಜನೆಯಡಿ 2017-18ನೇ ಸಾಲಿನಲ್ಲಿ ಆಯ್ಕೆಗೊಳಿಸಿದ ಫಲಾನುಭವಿಗಳಿಂದ ಸದರಿ ದಾಖಲೆಗಳನ್ನು ಕಡ್ಡಾಯವಾಗಿ ಪಡೆದು Loginನಲ್ಲಿ ಅಳವಡಿಸಲು ಹಾಗೂ ಸರ್ಕಾರದ ಮಹತ್ವಕಾಂಕ್ಷಿ ಕಾರ್ಯಕ್ರಮ ಎಲ್ಲಾ ಅರ್ಹ ಫಲಾನುಭವಿಗಳಿಗೆ ದೊರಕುವಂತೆ ಮಾಡಲು ಕ್ರಮವಹಿಸಲು ಕೋರಿದೆ.

ಹೆಚ್ಚಿನ ಮಾಹಿತಿಗೆ PPT ಮೂಲಕ ವಿವರಿಸಿದ್ದು, ನಿಗಮದ ವೆಬ್‌ಸೈಟ್‌ನಲ್ಲಿ ಲಭ್ಯವಿರುತ್ತದೆ

ವಂದನೆಗಳೊಂದಿಗೆ,

ತಮ್ಮ ವಿಶ್ವಾಸಿ

(ವಿ. ಅನ್ಬುಕುಮಾರ್)
ವ್ಯವಸ್ಥಾಪಕ ನಿರ್ದೇಶಕರು

ಪ್ರತಿ:

1. ಎಲ್ಲಾ ಪಂಚಾಯ್ತಿ ಅಭಿವೃದ್ಧಿ ಅಧಿಕಾರಿಗಳು, ಗ್ರಾಮ ಪಂಚಾಯ್ತಿ ಇವರಿಗೆ ಕೂಡಲೇ ಕ್ರಮವಹಿಸಲು.(ಆಯಾ ತಾಲ್ಲೂಕು ಪಂಚಾಯಿಯ ಕಾರ್ಯನಿರ್ವಹಣಾಧಿಕಾರಿಗಳ ಮೂಲಕ)
2. ಎಲ್ಲಾ ನಗರದ ಸ್ಥಳೀಯ ಸಂಸ್ಥೆಗಳ ಆಯುಕ್ತರು/ಪೌರಾಯುಕ್ತರು/ಮುಖ್ಯಾಧಿಕಾರಿಗಳು ಇವರಿಗೆ ಕೂಡಲೇ ಕ್ರಮವಹಿಸಲು.